## 99. ಬೃಹತ್ ನೀರಾವರಿ ಯೋಜನೆ ಅನುಷ್ಠಾನ

ರಾಜ್ಯದಲ್ಲಿ 5 ಲಕ್ಷ ಹೆಕ್ಟೇರ್‌ಗೆ ನೀರಾವರಿ ಸೌಲಭ್ಯ ಕಲ್ಪಿಸಲು ರೂ.22 ಸಾವಿರ ಕೋಟಿ ಮೊತ್ತದಲ್ಲಿ ಬೃಹತ್ ಸೂಕ್ಷ್ಮ ನೀರಾವರಿ ಯೋಜನೆ ಅನುಷ್ಠಾನಗೊಳಿಸಲಾಗುತ್ತಿದೆ ಎಂದು ಸಚಿವ ರಮೇಶ್ ಜಾರಕಿಹೊಳಿ ತಿಳಿಸಿದ್ದಾರೆ. 5ಲಕ್ಷ ಹೆಕ್ಟೇರ್‌ಗೆ ನೀರಾವರಿ ಸೌಲಭ್ಯ ಕಲ್ಪಿಸುವ ಯೋಜನೆ ಸಮರ್ಥ ಅನುಷ್ಠಾನ ಮತ್ತು ನಿರ್ವಹಣೆಗಾಗಿ ರಾಜ್ಯಮಟ್ಟದಲ್ಲಿ ಸೂಕ್ಷ್ಮ ನೀರಾವರಿ ನೀತಿ ರೂಪಿಸಲಾಗುವುದು ಎಂದು ಹಾಗೂ ಪ್ರಸಕ್ತ ಸಾಲಿನಲ್ಲಿ 1 ಲಕ್ಷ ಹೆಕ್ಟೇರ್ ಭೂ ಪ್ರದೇಶಕ್ಕೆ ನೀರಾವರಿ ಸೌಲಭ್ಯ ಕಲ್ಪಿಸುವ ನಿಟ್ಟಿನಲ್ಲಿ ಕಾರ್ಯಕ್ರಮ ರೂಪಿಸಲಾಗಿದೆ.

ರಾಜ್ಯದ ವಿವಿಧ ನೀರಾವರಿ ಯೋಜನೆಗಳಿಗಾಗಿ ಭೂ ಸ್ವಾಧೀನಪಡಿಸಿಕೊಳ್ಳುವ ಜಮೀನುಗಳ ರೈತರಿಗೆ ಶೀಘ್ರವಾಗಿ ಪರಿಹಾರ ಧನ ತಲುಪಿಸಲು ಇಲಾಖೆಯ ನಾಲ್ಕು ನಿಗಮಗಳಲ್ಲಿ ಭೂ ಸ್ವಾಧೀನಕ್ಕಾಗಿಯೇ ಪ್ರತ್ಯೇಕ ಅನುದಾನ ಹಂಚಿಕೆ ಮಾಡಲಾಗುವುದು ಎಂದು ಹೇಳಿದ್ದಾರೆ.

ಜಲಸಂಪನ್ಮೂಲ ಇಲಾಖೆಗೆ ಪ್ರತಿ ವರ್ಷ ಬಜೆಟ್‌ನಲ್ಲಿ ಒದಗಿಸಲಾಗುವ ಅನುದಾನವನ್ನು ನೀರಾವರಿಯೇತರ ಕಾಮಗಾರಿಗಳಿಗಾಗಿ ಬಳಸಿಕೊಳ್ಳುವುದನ್ನು ನಿರ್ಬಂಧಿಸಿ ನೀರಾವರಿ ಸೃಜಿಸುವ ಕಾಮಗಾರಿಗಳಿಗೆ ಆದ್ಯತೆ ನೀಡಲು ಕ್ರಮ ಕೈಗೊಳ್ಳಲು ತೀರ್ಮಾನಿಸಲಾಗಿದೆ ಎಂದಿದ್ದಾರೆ.

**ಅಣೆಕಟ್ಟು ಪುನಃಶ್ಚೇತನ:** ವಿಶ್ವಬ್ಯಾಂಕ್ ನೆರವಿನ ಯೋಜನೆಯಡಿ ರೂ.1500 ಕೋಟಿ ಮೊತ್ತದಲ್ಲಿ ರಾಜ್ಯದ ಅಣೆಕಟ್ಟುಗಳ ಪುನಃಶ್ಚೇತನ ಹಾಗೂ ಅಭಿವೃದ್ಧಿ ಯೋಜನೆ ಕಾಮಗಾರಿ ಕೈಗೊಳ್ಳಲು ಕೇಂದ್ರ ಜಲ ಆಯೋಗಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದ್ದು, ರಾಜ್ಯಕ್ಕೆ ರೂ.750 ಕೋಟಿ ಅನುದಾನ ನಿಗದಿಪಡಿಸಲಾಗಿದೆ ಎಂದು ತಿಳಿಸಿದ್ದಾರೆ.

ರಾಜ್ಯದಲ್ಲಿ ಸವಳು-ಜವಳು ಬಾಧಿತ ಪ್ರದೇಶವನ್ನು ಬಲಗೊಳಿಸಲು ಕ್ರಮ ಕೈಗೊಳ್ಳಲು ತೀರ್ಮಾನಿಸಲಾಗಿದೆ. ರಾಜ್ಯದ ವಿವಿಧ ಅಚ್ಚುಕಟ್ಟು ಪ್ರದೇಶಗಳಲ್ಲಿ ದುಸ್ಥಿತಿಯಲ್ಲಿರುವ ರಸ್ತೆಗಳನ್ನು ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಮೂಲಕ ನಿಗಮಗಳ ಅನುದಾನದೊಂದಿಗೆ ಹಂತ ಹಂತವಾಗಿ ಅಭಿವೃದ್ಧಿಪಡಿಸಲಾಗುವುದು ಎಂದು ಹೇಳಿದ್ದಾರೆ.

ಭದ್ರಾ ಮೇಲ್ದಂಡೆ ಯೋಜನೆಯ ಚಿತ್ರದುರ್ಗ ಶಾಖಾ ಕಾಲುವೆಯ 61 ಕಿ.ಮೀ.ವರೆಗಿನ ಮತ್ತು ಹೊಳಲ್ಕೆರೆ ಫೀಡರ್ ಕಾಲುವೆ ಕಾಮಗಾರಿಗಳನ್ನು ಪ್ರಸಕ್ತ ಸಾಲಿನಲ್ಲಿ ಪೂರ್ಣಗೊಳಿಸಿ ಈ ವ್ಯಾಪ್ತಿಯಡಿ ಬರುವ 48 ಕೆರೆಗಳನ್ನು ತುಂಬಿಸಲು ಹಾಗೂ ತರೀಕೆರೆ ಏತ ನೀರಾವರಿ ಯೋಜನೆಯಡಿ 10 ಸಾವಿರ ಹೆಕ್ಟೇರ್ ಪ್ರದೇಶಕ್ಕೆ ಸೂಕ್ಷ್ಮ ನೀರಾವರಿ ಕಲ್ಪಿಸಲಾಗುವುದು ಎಂದು ಹೇಳಿದ್ದಾರೆ.

ಕೃಷ್ಣಾ ಮೇಲ್ದಂಡೆ ಯೋಜನೆಯ ಭೂ ಸ್ವಾಧೀನಕ್ಕೆ ದರ ನಿಗದಿಪಡಿಸುವ ಕುರಿತು ಸೃಷ್ಟಿಯಾಗಿರುವ ಸಮಸ್ಯೆಯನ್ನು ನಿವಾರಿಸುವ ನಿಟ್ಟಿನಲ್ಲಿ ಮುಖ್ಯಮಂತ್ರಿ ಜೊತೆ ಚರ್ಚಿಸಿ ಸೂಕ್ತ ತೀರ್ಮಾನ ಕೈಗೊಳ್ಳಲಾಗುವುದು ಹಾಗೂ ಆಲಮಟ್ಟಿ ಜಲಾಶಯದ ಹಿನ್ನೀರಿನಲ್ಲಿ ಮುಳುಗಡೆಯಾಗಲಿರುವ ಗ್ರಾಮಗಳ ಪೈಕಿ ಕೆಲವೊಂದು ಗ್ರಾಮಗಳನ್ನು ನವೀನ ತಂತ್ರಜ್ಞಾನ ಬಳಸಿಕೊಂಡು ಮುಳುಗಡೆಯಾಗದಂತೆ ಜಲಾಶಯದ ಎತ್ತರ ಹೆಚ್ಚಿಸುವ ನಿಟ್ಟಿನಲ್ಲಿ ಪರಿಶೀಲಿಸಲು ತಾಂತ್ರಿಕ ಸಮಿತಿ ರಚಿಸಲಾಗುವುದು ಎಂದಿದ್ದಾರೆ.

ರಾಜ್ಯದಲ್ಲಿ ಪ್ರಸ್ತುತ ಬೃಹತ್ ಪ್ರಮಾಣದಲ್ಲಿ ಏತ ನೀರಾವರಿ ಯೋಜನೆ ಮೂಲಕ ಕೆರೆ ತುಂಬಿಸುವ ಮತ್ತು ಕುಡಿಯುವ ನೀರಿನ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದ್ದು, ಈ ಯೋಜನೆಗಳನ್ನು ತಾಂತ್ರಿಕವಾಗಿ ಮತ್ತು ಸಮರ್ಥವಾಗಿ ನಿರ್ವಹಿಸುವ ನಿಟ್ಟಿನಲ್ಲಿ ರಾಜ್ಯ ಮಟ್ಟದ ನಿರ್ವಹಣೆ ನೀತಿ ರೂಪಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ವಿವರಿಸಿದ್ದಾರೆ.

**ಅಧಿಸೂಚನೆಗೆ ಕ್ರಮ:** ಕೃಷ್ಣಾ ಜಲ ವಿವಾದ-2 ನ್ಯಾಯಾಧೀಕರಣದ ತೀರ್ಪು ಗೆಜೆಟ್‌ನಲ್ಲಿ ಪ್ರಕಟಿಸಲು ಕೇಂದ್ರ ಸರ್ಕಾರಕ್ಕೆ ಸೂಕ್ತ ನಿರ್ದೇಶನ ನೀಡುವಂತೆ ಸುಪ್ರೀಂಕೋರ್ಟ್‌ನಲ್ಲಿರುವ ದಾವೆಯ ಕುರಿತು ತುರ್ತಾಗಿ ಅಗತ್ಯ ಕ್ರಮ ತೆಗೆದುಕೊಳ್ಳಲು ಚರ್ಚಿಸಲಾಗಿದ್ದು, ನ್ಯಾಯಾಧೀಕರಣ ತೀರ್ಪು ಗೆಜೆಟ್‌ನಲ್ಲಿ ಪ್ರಕಟವಾಗುವಂತೆ ಕ್ರಮ ಕೈಗೊಳ್ಳಲಾಗುವುದು ಎಂದು ಸಚಿವ ರಮೇಶ ಜಾರಕಿಹೊಳಿ ಹೇಳಿದ್ದಾರೆ.

**ಕೇಂದ್ರದ ಜೊತೆ ಸಮನ್ವಯತೆ:** ಮೇಕೆದಾಟು ಯೋಜನೆಗೆ ಸಂಬಂಧಿಸಿದಂತೆ ರೂ.9 ಸಾವಿರ ಕೋಟಿ ಮೊತ್ತದ ಕ್ರಿಯಾ ಯೋಜನೆ ರೂಪಿಸಿ ಕೇಂದ್ರ ಜಲ ಆಯೋಗಕ್ಕೆ ಸಲ್ಲಿಸಲಾಗಿದ್ದು, ಯೋಜನೆಯಡಿ 5,051 ಹೆಕ್ಟೇರ್ ಅರಣ್ಯ ಭೂಮಿ ಮುಳುಗಡೆಯಾಗುತ್ತಿದ್ದು, ಇದರಲ್ಲಿ 81 ಹೆಕ್ಟೇರ್ ವನ್ಯಜೀವಿ, ಅರಣ್ಯ ಕ್ಷೇತ್ರ ಇರುವುದರಿಂದ ಕೇಂದ್ರ

ಸರ್ಕಾರದ ಜೊತೆ ಸಮನ್ವಯತೆ ಸಾಧಿಸಲಾಗುತ್ತಿದೆ ಎಂದಿದ್ದಾರೆ. ಕೆ.ಆರ್.ಎಸ್. ಬೃಂದಾವನ ಉದ್ಯಾನ ವಿಶ್ವದರ್ಜೆಗೆ ಏರಿಸುವ ನಿಟ್ಟಿನಲ್ಲಿ ಖಾಸಗಿ ಸಾರ್ವಜನಿಕ ಸಹಭಾಗಿತ್ವದಡಿ ಅಭಿವೃದ್ಧಿಪಡಿಸಲು ರೂ.435 ಕೋಟಿ ಮೊತ್ತದ ಪ್ರಸ್ತಾವನೆ ಸಿದ್ಧಪಡಿಸಲಾಗಿದ್ದು, ನಾಲ್ಕು ಹಂತಗಳಲ್ಲಿ ಯೋಜನೆ ಅನುಷ್ಠಾನಗೊಳಿಸಲಾಗುವುದು ಎಂದು ಹೇಳಿದ್ದಾರೆ.

ಆಧಾರ: ಉದಯವಾಣಿ, ದಿನಾಂಕ:12.09.2020